# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1594 |
| ಸದಸ್ಯರ ಹೆಸರು | : | ಶ್ರೀ ಕಿಶೋರ್ ಕುಮಾರ್ ಪುತ್ತೂರು (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 19.12.2025 |
| ಉತ್ತರಿಸುವವರು | : | ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| (ಅ) | ರಾಜ್ಯದಲ್ಲಿ ಖಾಲಿಯಿರುವ ಪಂಚಾಯತ್ ಅಭಿವೃದ್ಧಿ ಅಧಿಕಾರಿ, ಕಾರ್ಯದರ್ಶಿ ಗ್ರೇಡ್-1 ಹಾಗೂ ಕಾರ್ಯದರ್ಶಿ ಗ್ರೇಡ್ 2 ಮತ್ತು ದ್ವಿತೀಯ ದರ್ಜೆ ಲೆಕ್ಕ ಸಹಾಯಕರ ಹುದ್ದೆಗಳೆಷ್ಟು (ಜಿಲ್ಲಾವಾರು ಮಾಹಿತಿ ನೀಡುವುದು). | ಜಿಲ್ಲಾವಾರು ಮಾಹಿತಿಯನ್ನು ಅನುಬಂಧ-1ರಲ್ಲಿ ನೀಡಿದೆ |
| (ಆ) | ಪಂಚಾಯತ್ ಅಭಿವೃದ್ಧಿ ಅಧಿಕಾರಿ ಹುದ್ದೆಯ ನೇಮಕಾತಿ ಅಧಿಸೂಚನೆ ಹೊರಡಿಸಿ ಎರಡು ವರ್ಷವಾಗಿದ್ದು ಯಾಕೆ ಇನ್ನೂ ನೇಮಕಾತಿ ಪ್ರಕ್ರಿಯೆ ಪೂರ್ಣಗೊಂಡಿರುವುದಿಲ್ಲ; ಖಾಲಿಯಿರುವ ಸದರಿ ಹುದ್ದೆಗಳನ್ನು ಭರ್ತಿಗೊಳಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ; | 1. ನೇರ ನೇಮಕಾತಿ ಕೋಟಾದಡಿ ಖಾಲಿ ಇರುವ ಪಂಚಾಯತ್ ಅಭಿವೃದ್ಧಿ ಅಧಿಕಾರಿ ಹುದ್ದೆಗಳ ಪೈಕಿ ಉಳಿಕೆ ಮೂಲ ವೃಂದದ 150 ಮತ್ತು ಕಲ್ಯಾಣ ಕರ್ನಾಟಕ ವೃಂದದ 97 ಒಟ್ಟು 247 ಪಂಚಾಯತಿ ಅಭಿವೃದ್ಧಿ ಅಧಿಕಾರಿ ವೃಂದದ ಹುದ್ದೆಗಳ ನೇಮಕಾತಿಗೆ ಕರ್ನಾಟಕ ಲೋಕ ಸೇವಾ ಆಯೋಗದಿಂದ ದಿನಾಂಕ:15.03.2024 ರಂದು ಅಧಿಸೂಚನೆಯನ್ನು ಮತ್ತು 17-09-2024 ರಲ್ಲಿ ತಿದ್ದುಪಡಿ ಅಧಿಸೂಚನೆಗಳನ್ನು ಹೊರಡಿಸಿದ್ದು, ದಿನಾಂಕ:16.11.2024 ಮತ್ತು 17.11.2024ರಂದು ಕಲ್ಯಾಣ ಕರ್ನಾಟಕ ವೃಂದದ ಹುದ್ದೆಗಳಿಗೆ ಹಾಗೂ ಉಳಿಕೆ ಮೂಲ ವೃಂದದ ಹುದ್ದೆಗಳಿಗೆ ದಿನಾಂಕ:07.12.2024 ಮತ್ತು 08.12.2024ರಂದು ಸ್ಪರ್ಧಾತ್ಮಕ ಪರೀಕ್ಷೆಗಳನ್ನು ನಡೆಸಲಾಗಿರುತ್ತದೆ.<br><br>2. ಮುಂದುವರೆದು, ದಾಖಲೆಗಳ ಪರಿಶೀಲನೆಗಾಗಿ 1:3 ಅನುಪಾತದಲ್ಲಿ ಅರ್ಹ ಅಭ್ಯರ್ಥಿಗಳ ಪಟ್ಟಿಯನ್ನು ಹೈದರಾಬಾದ್ ಕರ್ನಾಟಕ ವೃಂದಕ್ಕೆ ಸಂಬಂಧಿಸಿದಂತೆ ದಿನಾಂಕ:08-07-2025 ರಂದು ಮತ್ತು ಉಳಿಕೆ ಮೂಲ ವೃಂದಕ್ಕೆ ಸಂಬಂಧಿಸಿದಂತೆ 20-08-2025 ರಂದು ಪ್ರಕಟಿಸಿದ್ದು, ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಪ್ರಕಟಿಸಲು ಬಾಕಿ ಇರುತ್ತದೆ. ನೇಮಕಾತಿ ಪ್ರಕ್ರಿಯೆ ಪ್ರಗತಿಯಲ್ಲಿರುತ್ತದೆ. |

| | | |
|---|---|---|
| (ಇ) | ಕಾರ್ಯದರ್ಶಿ ಗ್ರೇಡ್-2 ಮತ್ತು ದ್ವಿತೀಯ ದರ್ಜೆ ಲೆಕ್ಕ ಸಹಾಯಕರ ಹುದ್ದೆಯಿಂದ ಕಾರ್ಯದರ್ಶಿ ಗ್ರೇಡ್-1 ಹುದ್ದೆಗೆ ಮತ್ತು ಕಾರ್ಯದರ್ಶಿ ಗ್ರೇಡ್-1 ಹುದ್ದೆಯಿಂದ ಪಂಚಾಯತ್ ಅಭಿವೃದ್ಧಿ ಅಧಿಕಾರಿ ಹುದ್ದೆಗೆ ಮುಂಬಡ್ತಿ ನೀಡಲು ಯಾವ ಕ್ರಮ ವಹಿಸಲಾಗಿದೆ; | 1. ಸರ್ಕಾರದ ಅಧಿಸೂಚನೆ ಸಂಖ್ಯೆ:RDPR/313/GPK/2022 (E), ದಿನಾಂಕ:13.03.2024 ಗ್ರಾಮ ಪಂಚಾಯಿತಿ ಕಾರ್ಯದರ್ಶಿ ಮತ್ತು ಗ್ರಾಮೀಣಾಭಿವೃದ್ಧಿ ಸಹಾಯಕ (ಗ್ರೇಡ್-1) ವೃಂದದ ಮಂಜೂರಾದ ಹುದ್ದೆಗಳ ಪೈಕಿ ಶೇ. 50 ರಷ್ಟು ಹುದ್ದೆಗಳನ್ನು ಗ್ರಾಮ ಪಂಚಾಯಿತಿ ಕಾರ್ಯದರ್ಶಿ ಮತ್ತು ಗ್ರಾಮೀಣಾಭಿವೃದ್ಧಿ ಸಹಾಯಕ(ಗ್ರೇಡ್-2) ಮತ್ತು ದ್ವಿತೀಯ ದರ್ಜೆ ಲೆಕ್ಕ ಸಹಾಯಕ ವೃಂದದಿಂದ 3:2 ಪ್ರಮಾಣದಲ್ಲಿ ಪದೋನ್ನತಿ ಮೂಲಕ ಭರ್ತಿ ಮಾಡಲು ಅವಕಾಶ ವಿರುತ್ತದೆ.<br><br>2. ಅದರನ್ವಯ ಆಯಾ ಜಿಲ್ಲಾ ಪಂಚಾಯಿತಿ ಹಂತದಲ್ಲಿ ಗ್ರಾಮ ಪಂಚಾಯಿತಿ ಕಾರ್ಯದರ್ಶಿ ಮತ್ತು ಗ್ರಾಮೀಣಾಭಿವೃದ್ಧಿ ಸಹಾಯಕ (ಗ್ರೇಡ್-2) ವೃಂದದ ಹಾಗೂ ದ್ವಿತೀಯ ದರ್ಜೆ ಲೆಕ್ಕ ಸಹಾಯಕರ ವೃಂದದ ಜ್ಯೇಷ್ಠತಾ ಪಟ್ಟಿಗಳಲ್ಲಿನ ಜ್ಯೇಷ್ಠತೆ, ಅರ್ಹತೆ ಮತ್ತು ಗ್ರಾಮ ಪಂಚಾಯಿತಿ ಕಾರ್ಯದರ್ಶಿ (ಗ್ರೇಡ್-1) ವೃಂದದ ಮುಂಬಡ್ತಿ ಕೋಟಾದಡಿ ಖಾಲಿ ಇರುವ ಹುದ್ದೆಗಳ ಲಭ್ಯತೆಗೆ ಅನುಗುಣವಾಗಿ ಪದೋನ್ನತಿಗೆ ಕ್ರಮ ವಹಿಸಲಾಗುತ್ತಿದೆ.<br><br>3. ಮುಂಬಡ್ತಿ ಕೋಟಾದಡಿ ಖಾಲಿ ಇರುವ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಹುದ್ದೆಗಳಿಗೆ ಸಂಬಂಧಿಸಿದಂತೆ, ದಿನಾಂಕ:01.01.2025ರಲ್ಲಿದ್ದಂತೆ ಗ್ರಾಮ ಪಂಚಾಯಿತಿ ಕಾರ್ಯದರ್ಶಿ (ಗ್ರೇಡ್-1) ವೃಂದದ ರಾಜ್ಯ ಮಟ್ಟದ ಕರಡು ಜ್ಯೇಷ್ಠತಾ ಪಟ್ಟಿಯನ್ನು ಪ್ರಕಟಿಸಲಾಗಿದ್ದು, ಸ್ವೀಕೃತಗೊಂಡಿರುವ ಆಕ್ಷೇಪಣೆಗಳನ್ನು ಪರಿಶೀಲಿಸಲಾಗಿರುತ್ತದೆ. ರಾಜ್ಯ ಮಟ್ಟದ ಅಂತಿಮ ಜ್ಯೇಷ್ಠತಾ ಪಟ್ಟಿ ಪ್ರಕಟಿಸಲು ಪರಿಶೀಲನೆಯಲ್ಲಿದ್ದು, ಮುಂಬಡ್ತಿ ಕೋಟಾದಡಿಯಲ್ಲಿ ಖಾಲಿ ಇರುವ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಹುದ್ದೆಗಳನ್ನು ತುಂಬಲು ಪ್ರಕ್ರಿಯೆ ಚಾಲ್ತಿಯಲ್ಲಿರುತ್ತದೆ. |
| (ಈ) | ರಾಜ್ಯದಲ್ಲಿ ಖಾಲಿಯಿರುವ ಗ್ರಾಮ ಪಂಚಾಯತ್ ಸಿಬ್ಬಂದಿ ಹುದ್ದೆಗಳೆಷ್ಟು, (ಬೇರೆ ಬೇರೆ ಹುದ್ದೆಗಳ ಜಿಲ್ಲಾವಾರು ಮಾಹಿತಿ ನೀಡುವುದು), ಗ್ರಾಮ ಪಂಚಾಯಿತಿಗಳಲ್ಲಿ ಹಲವಾರು ಸಿಬ್ಬಂದಿ ಹುದ್ದೆಗಳು ಖಾಲಿ ಇದ್ದರೂ ಯಾಕೆ ಸರ್ಕಾರ ಇವರೆಗೂ ಸದರಿ ಹುದ್ದೆಗಳ ಭರ್ತಿಗೆ ಕ್ರಮ ಕೈಗೊಂಡಿರುವುದಿಲ್ಲ; ಗ್ರಾಮ ಪಂಚಾಯತ್ ಸಿಬ್ಬಂದಿ ಹುದ್ದೆಯಿಂದ ಕಾರ್ಯದರ್ಶಿ ಗ್ರೇಡ್-2 ಮತ್ತು ದ್ವಿತೀಯ ದರ್ಜೆ ಲೆಕ್ಕ ಸಹಾಯಕರ ಹುದ್ದೆಗಳಿಗೆ ಬಡ್ತಿ ನೀಡಲು ಏನು ಕ್ರಮ ವಹಿಸಲಾಗಿದೆ; | 1 ರಾಜ್ಯದಲ್ಲಿ ಖಾಲಿ ಇರುವ ಗ್ರಾಮ ಪಂಚಾಯತ್ ಸಿಬ್ಬಂದಿಯ ಖಾಲಿ ಹುದ್ದೆಗಳ ಜಿಲ್ಲಾವಾರು ಮಾಹಿತಿಯನ್ನು ಅನುಬಂಧ-2 ರಲ್ಲಿ ನೀಡಿದೆ.<br><br>2. ನೇರ ಮೀಸಲಾತಿ ಅನುಷ್ಠಾನದ ಕುರಿತಾಗಿ ಪ್ರಸ್ತುತ 'ನ್ಯಾಯಾಲಯದಲ್ಲಿ ಪ್ರಕರಣ ಬಾಕಿ ಇದ್ದು, ಪ್ರಕರಣವು ಇತ್ಯರ್ಥಗೊಂಡ ನಂತರ ನೇರ ನೇಮಕಾತಿ ಕೋಟಾದಡಿ ಖಾಲಿ ಇರುವ ಗ್ರಾಮ ಪಂಚಾಯತಿ ಸಿಬ್ಬಂದಿಗಳ ನೇಮಕಾತಿ ಮಾಡಲು ಕ್ರಮವಹಿಸಬೇಕಿರುತ್ತದೆ. |

| | | |
|---|---|---|
| (ಉ) | ಗ್ರಾಮ ಪಂಚಾಯತ್ ಸಿಬ್ಬಂದಿಗಳಿಗೆ ESI, PF ಮತ್ತು ಪ್ರಧಾನ ಮಂತ್ರಿ ಸುರಕ್ಷಾ ಭೀಮಾ ಯೋಜನೆ, ಪ್ರಧಾನ ಮಂತ್ರಿ ಜೀವನ ಜ್ಯೋತಿ ಭೀಮಾ ಯೋಜನೆ, SBIನ ಗ್ರೂಪ್ ಪರ್ಸನಲ್ ಆಕ್ಸಿಡೆಂಟ್ ಇನ್ಸೂರೆನ್ಸ್ ಮುಂತಾದ ವಿಮಾ ಪಾಲಿಸಿಗಳನ್ನು ಗ್ರಾಮ ಪಂಚಾಯಿತಿಯಿಂದ ಮಾಡಲು ಅವಕಾಶವಿದ್ದು ಪ್ರಸ್ತುತ ಸಾಲಿನಲ್ಲಿ ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯ ಯಾವ ಗ್ರಾಮ ಪಂಚಾಯತಿಗಳು ಸದರಿ ಸೌಲಭ್ಯಗಳನ್ನು ಸಿಬ್ಬಂದಿಗಳಿಗೆ ನೀಡಿದೆ? (ಗ್ರಾಮ ಪಂಚಾಯತ್ ವಾರು ವಿವರ ನೀಡುವುದು) | ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳ ಗ್ರಾಮ ಪಂಚಾಯಿತಿವಾರು ಮಾಹಿತಿಯನ್ನು ಅನುಬಂಧ-3 ರಲ್ಲಿ ನೀಡಿದೆ. |

**ಸಂಖ್ಯೆ:** ಗ್ರಾಅಪ 1025 ಗ್ರಾಪಂಅ 2025

**(ಪ್ರಿಯಾಂಕ್ ಖರ್ಗೆ)**
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ
ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು